# ಬಿ.ಬಿ.ಎಂ.ಪಿ ಮಹದೇವಪುರ ವಲಯ, ವಾರ್ಡ್ ಸಂಖ್ಯೆ.55, ದೇವಸಂದ್ರ

## ವಾರ್ಡ್ ಸಮಿತಿಯ ನಡವಳಿಗಳು

******

ದಿನಾಂಕ: 05/01/2019

ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳು ಹಾಗೂ ಅಧಿಕಾರಿಗಳು

1. ಶ್ರೀ. ಎಂ.ಎನ್.ಶ್ರೀಕಾಂತ್
2. ಶ್ರೀ. ಪಲ್‌ರಾಜ್
3. ಶ್ರೀ. ಆರ್.ಚಿರಂಜೀವಿ
4. ಶ್ರೀಮತಿ ಆರ್.ಲಲಿತ
5. ಶ್ರೀಮತಿ ರತ್ನಮ್ಮ
6. ಶ್ರೀಮತಿ ಅರುಣ.ಎಸ್
7. ಶ್ರೀ. ಬಿ.ನಾಗರಾಜ್
8. ಶ್ರೀ. ಗೋವಿಂದರಾಜು
9. ಶ್ರೀ. ಎಂ.ನಾಗರಾಜ್
10. ಶ್ರೀ. ಎಂ.ಮಹೇಶ್
11. ಶ್ರೀ. ಮಂಜುನಾಥ್.ಎಸ್

**ಹಾಜರಿದ್ದ ಅಧಿಕಾರಿಗಳು**

1. ಶ್ರೀ. ವಿನಯ್. ಕೆ, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ.55, ದೇವಸಂದ್ರ.
2. ಶ್ರೀ. ಮುಕುಂದ, ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.55, ದೇವಸಂದ್ರ.

ದಿನಾಂಕ 05/01/19 ರಂದು ಕೆ.ಆರ್.ಪುರ ವಿಧಾನಸಭಾ ಕ್ಷೇತ್ರದ, ಬಿ.ಬಿ.ಎಂ.ಪಿ ಮಹದೇವಪುರ ವಲಯದ ವಾರ್ಡ್ ಸಂಖ್ಯೆ.55, ದೇವಸಂದ್ರದ ವಾರ್ಡ್ ಸಮಿತಿಯ ಸಭೆಯನ್ನು ಮಾನ್ಯ ಅಧ್ಯಕ್ಷರು ವಾರ್ಡ್ ಸಮಿತಿ ಮತ್ತು ಬಿ.ಬಿ.ಎಂ.ಪಿ ಸದಸ್ಯರಾದ ಶ್ರೀ. ಎಂ.ಎನ್.ಶ್ರೀಕಾಂತ್ ಮತ್ತು ವಾರ್ಡ್ ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರಾದ ಶ್ರೀ. ವಿನಯ್.ಕೆ ರವರ ಸಮ್ಮುಖದಲ್ಲಿ ನಡೆಸಲಾಯಿತು.

Scanned with CamScanner

ಸದರಿ ಸಭೆಯಲ್ಲಿ ಮೊಟ್ಟಮೊದಲಿಗೆ ಎಲ್ಲಾ ಸದಸ್ಯರ ಪರಸ್ಪರ ಪರಿಚಯ ಮಾಡಿಕೊಂಡು, ಮಾನ್ಯ ಸದಸ್ಯರು ವಾರ್ಡ್‌ನಲ್ಲಿ ಮಾಡಿರುವಂತಹ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಸವಿವರವಾಗಿ ತಿಳಿಸಲಾಯಿತು.

ಮೊದಲಿಗೆ ಕಸ ವಿಲೇವಾರಿಯ ಬಗ್ಗೆ ಚರ್ಚಿಸಲಾಗಿ, ದೇವಸಂದ್ರ ವಾರ್ಡ್‌ನಲ್ಲಿಎಲ್ಲಾ ರಸ್ತೆಗಳನ್ನು ಪ್ರತಿ ದಿನ ಸ್ವಚ್ಛಗೊಳಿಸಬೇಕು, ಕಸವನ್ನು ವಿಂಗಡಿಸಿ ಸಾಗಾಣಿಕೆ ಮಾಡಬೇಕು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

2017–18ನೇ ಸಾಲಿನ ಪಿ.ಓ.ಡಬ್ಲೂ ಅನುಧಾನದಲ್ಲಿ ತೆಗೆದುಕೊಂಡಿರುವ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆಯನ್ನು ಮಾಡುವ ಬಗ್ಗೆ ಚರ್ಚಸಲಾಯಿತು. ತದ ನಂತರ 2017–18ನೇ ಸಾಲಿನಲ್ಲಿ ನೀರು ಸರಬರಾಜಿಗೆ ನೀಡಿರುವ ಅನುದಾನದಲ್ಲಿ, ವಾರ್ಡ್‌ನಲ್ಲಿ ನೀರಿನ ಸಮಸ್ಯೆ ಇರುವ ಕಡೆ ಬೋರ್‌ವೆಲ್‌ಗಳನ್ನು ಕೊರೆಸಲು ತೀರ್ಮಾನಿಸಲಾಯಿತು. ಬಿ.ಬಿ.ಎಂ.ಪಿ ಕಛೇರಿ ಕಟ್ಟಡಕ್ಕೆ ರೂ.100.00ಲಕ್ಷಗಳ ಅನುದಾನವನ್ನು ನೀಡಲಾಗಿದ್ದು, ಕಾಮಗಾರಿಗೆ ಶಂಕುಸ್ಥಾಪನೆಯನ್ನು ಮಾಡಲಾಗಿದ್ದು, ಕಾಮಗಾರಿಯು ಪ್ರಾರಂಭವಾಗಿರುವ ಬಗ್ಗೆ ಚರ್ಚಿಸಲಾಯಿತು. ಸದಸ್ಯರು ಆಗಿಂದಾಗೆ ಕಾಮಗಾರಿಗಳನ್ನು ಪರಿವೀಕ್ಷಿಸಿ ಉತ್ತಮ ಸಲಹೆಗಳನ್ನು ಹಾಗೂ ಅತ್ಯವಶ್ಯಕವಾಗಿರುವ ಕಾಮಗಾರಿಗಳನ್ನು ಗುರುತಿಸಿ ಮುಂದಿನ ಸಭೆಯಲ್ಲಿ ತಿಳಿಸಲು ಕೋರಲಾಯಿತು.

ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಮಾನ್ಯಅಧ್ಯಕ್ಷರು ವಾರ್ಡ್ ಸಮಿತಿ | ವಾರ್ಡ್ ಸಮಿತಿ ಕಾರ್ಯದರ್ಶಿಗಳು |
| ಮತ್ತು ಬಿ.ಬಿ.ಎಂ.ಪಿ ಸದಸ್ಯರು | ಹಾಗೂ ಸಹಾಯಕ ಅಭಿಯಂತರರು |

Scanned with CamScanner